ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE :

ಸೆ.21ರಿಂದ 30ರವರೆಗೆ ವಿಧಾನಮಂಡಲ ಅಧಿವೇಶನ

ಕೊರೋನಾ: ನಾಳೆಯಿಂದ ಹೊಸ ಬಗೆ ಅಧಿವೇಶನ

ಕೊರೋನಾ ಕಾರಣ ಸಕಲ ಸುರಕ್ಷತಾ ಕ್ರಮ | ನೆಗೆಟಿವ್ ಇದ್ದರೆ ಮಾತ್ರ ವಿಧಾನಸಭೆ, ವಿಧಾನಪರಿಷತ್‌ಗೆ ಪ್ರವೇಶ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ನಗರದಲ್ಲಿ ಕೊರೋನಾ ಅಬ್ಬರದ ನಡುವೆ ವಿಧಾನಮಂಡಲದ ಅಧಿವೇಶನವು ಭಾರಿ ಮುಂಜಾಗ್ರತಾ ಕ್ರಮಗಳ ನಡುವೆ ಹೊಸ ಬಗೆಯಲ್ಲಿ ಸೋಮವಾರದಿಂದ ಆರಂಭವಾಗಲಿದೆ. ಸಂಸತ್ ಮುಂಗಾರು ಅಧಿವೇಶನದಲ್ಲಿ ಯಾವ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆಯೋ ಅದೇ ಮಾದರಿಯ ಮುನ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಇತ್ತೀಚೆಗೆ ಸರ್ಕಾರ ಹೊರಡಿಸಿರುವ ಎಸ್‌ಒಪಿ, ಭೂ ಮಾರ್ಗಸೂಚಿ ಕಾಯ್ದೆ ತಿದ್ದುಪಡಿ ಸೇರಿದಂತೆ ಹಲವು ಸುಗ್ರೀವಾಜ್ಞೆಗಳಿಗೆ ವಿಧಾನಮಂಡಲದ ಒಪ್ಪಿಗೆ ಪಡೆಯಲೇ ಬೇಕಾಗಿರುವ ಹಿನ್ನೆಲೆಯಲ್ಲಿ ವಿಧಾನಮಂಡಲ ಕಲಾಪವನ್ನು ಸುಸೂತ್ರವಾಗಿ ನಡೆಸಿಕೊಂಡು ಹೋಗುವ ಆಯೋಜನೆ ಮಾಡಲಾಗಿದೆ. ಸೆ. 21 (ಸೋಮವಾರ)ದಿಂದ ಸೆ. 30ರವರೆಗೆ ಒಟ್ಟು ಎಂಟು ದಿನಗಳ ಕಾಲ (ರಜೆ ಹೊರತುಪಡಿಸಿ) ಕಲಾಪ ನಡೆಯಲಿದೆ. ಕೊರೋನಾ ಸೋಂಕಿನ ಅಬ್ಬರದ ನಡುವೆಯೇ ಕಲಾಪ ನಡೆಸುವ ಅನಿವಾರ್ಯತೆ ಹಿನ್ನೆಲೆಯಲ್ಲಿ ಪಾಲ್ಗೊಳ್ಳುವ ಪ್ರತಿಯೊಬ್ಬರಿಗೂ ಸೋಂಕು ಪರೀಕ್ಷೆ ಸೇರಿದಂತೆ ಹತ್ತು ಹಲವು ಸುರಕ್ಷತಾ ಕ್ರಮಗಳನ್ನು ಅನುಸರಿಸಲಾಗಿದೆ.

ಅಧಿವೇಶನಕ್ಕೆ ಏನೇನು ಸಿದ್ಧತೆ?

- ಎಲ್ಲರಿಗೂ ಕೊರೋನಾ ಪರೀಕ್ಷೆ ಕಡ್ಡಾಯ
- ಸಾಮಾಜಿಕ ಅಂತರ ಕಾಯ್ದುಕೊಂಡು ಆಸನ ವ್ಯವಸ್ಥೆ
- ಪ್ರತಿ ಸದಸ್ಯರ ಆಸನದ ನಡುವೆ ಫೈಬರ್ ಶೀಟ್
- ಸದಸ್ಯರಿಗೆ ಫೇಸ್ ಶೀಲ್ಡ್, ಸ್ಯಾನಿಟೈಸರ್, ಮಾಸ್ಕ್
- ಪಿಎ, ಗನ್‌ಮ್ಯಾನ್‌ಗಳಿಗೆ ಪ್ರವೇಶ ನಿರ್ಬಂಧ
- ಸಾರ್ವಜನಿಕರ ವೀಕ್ಷಣೆಗೂ ಅವಕಾಶವಿಲ್ಲ
- ಸಾರ್ವಜನಿಕರ ಗ್ಯಾಲರಿಯಲ್ಲಿ ಪತ್ರಕರ್ತರು

ಪ್ರಮುಖವಾಗಿ ಕಲಾಪದಲ್ಲಿ ಭಾಗಿಯಾಗುವ ಮುನ್ನ ಕೊವೀಡ್ ಪರೀಕ್ಷೆ ಕಡ್ಡಾಯ ಮಾಡಿ, ನೆಗೆಟಿವ್ ವರದಿ ಇದ್ದರೆ ಮಾತ್ರ ಪ್ರವೇಶಾವಕಾಶ ಕಲ್ಪಿಸಲಾಗಿದೆ. ಸೆ. 18 ಮತ್ತು 19 ರಂದು ವಿಧಾನಸೌಧ ಬ್ಯಾಂಕ್ವೆಟ್ ಸಭಾಂಗಣದಲ್ಲಿ ಒಟ್ಟು 1200 ಸದಸ್ಯರಿಗೆ ಕೋವಿಡ್ ಪರೀಕ್ಷೆ ಮಾಡಲಾಗಿದೆ. ಎರಡು ದಿನಗಳ ಅವಧಿಯಲ್ಲಿ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹಗಡೆ ಕಾಗೇರಿ, ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ, ಉಪ

ಸಭಾಧ್ಯಕ್ಷ ಡಿ.ಕೆ. ಶಿವಕುಮಾರ್, ಶಾಸಕರಾದ ಆಜಯ್ ಸಿಂಗ್, ಕಂಪ್ಲಿ ಗಣೇಶ್, ಸಿ.ಪಿ. ಯೋಗೇಶ್ವರ್ ಮತ್ತು ಇತರ ಅಧಿಕಾರಿಗಳು ಕೋವಿಡ್ ಪರೀಕ್ಷೆ ಮಾಡಿಸಿಕೊಂಡರು.

ಇತರೆ ಸುರಕ್ಷತಾ ಕ್ರಮ, ನಿರ್ಬಂಧ: ಆರು ತಿಂಗಳ ನಂತರ ನಡೆಯುತ್ತಿರುವ ಅಧಿವೇಶನದಲ್ಲಿ ಸದಸ್ಯರು, ಅಧಿಕಾರಿಗಳು, ಮಾಧ್ಯಮ ಪ್ರತಿನಿಧಿಗಳ ಸುರಕ್ಷತೆಗೆ ವಿವಿಧ ರೀತಿಯ ಸುರಕ್ಷತಾ ವ್ಯವಸ್ಥೆ ಮಾಡಲಾಗಿದೆ. ಹಲವು ನಿರ್ಬಂಧ ವಿಧಿಸಲಾಗಿದೆ. ಹೆಚ್ಚು ಕಡಿಮೆ ಒಂದು ತಿಂಗಳಿಂದ ಸದಸ್ಯರ ಆಸನದ ನಡುವೆ ಅಂತರ ಕಾಪಾಡಲು ಪ್ಲಾಸ್ಟಿಕ್ ಫೈಬರ್ ಶೀಟ್ ಪರದೆ ಅಳವಡಿಸಲಾಗಿದೆ. ಈ ಬಾರಿ ಮಾಧ್ಯಮ ಪ್ರತಿನಿಧಿಗಳ ಗ್ಯಾಲರಿಯನ್ನು ಸಾರ್ವಜನಿಕರ ಗ್ಯಾಲರಿಗೆ ವರ್ಗಾಯಿಸಲಾಗಿದೆ. ಹೀಗಾಗಿ ಸಭಾಧ್ಯಕ್ಷ, ಸಭಾಪತಿಗಳ ಬಲಭಾಗದಲ್ಲಿನ ಗ್ಯಾಲರಿಯನ್ನು ವಿಧಾನಕಾರ್ಯದರ್ಶಿ ಮಟ್ಟದ ಅಧಿಕಾರಿಗಳಿಗೆ ಮೀಸಲಿಡಲಾಗಿದೆ. ಅಧಿನ ಕಾರ್ಯದರ್ಶಿಗಿಂತ ಕೆಳಗಿರುವ ಅಧಿಕಾರಿಗಳಿಗೆ ಸಹ ಗ್ಯಾಲರಿಯಲ್ಲಿ ವ್ಯವಸ್ಥೆ ಮಾಡಲಾಗಿದೆ. ⊙